**ಕರ್ನಾಟಕ ಸರ್ಕಾರ**

ಸಂಖ್ಯೆ:ಪಿಯು/187/ಸಿಬ್ಬಂದಿ/ಸಿಆರ್-3/ಉ.ನೇ/2015-16(ಭಾಗ-4)

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
ಮಲ್ಲೇಶ್ವರಂ, 18ನೇ ಅಡ್ಡರಸ್ತೆ,
ಬೆಂಗಳೂರು-560012.
ದಿನಾಂಕ: 03-03-2022.

# ಜ್ಞಾಪನ

**ವಿಷಯ:**- ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ಹುದ್ದೆಗೆ ಆಯ್ಕೆಯಾಗಿ, ನೇಮಕಾತಿ ಆದೇಶ ಪಡೆದು, ನಿಗದಿತ ಅವಧಿಯಲ್ಲಿ ಕರ್ತವ್ಯಕ್ಕೆ ಹಾಜರಾಗಿದ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದುಪಡಿಸುವ ಬಗ್ಗೆ.

**ಉಲ್ಲೇಖ:**-1. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 35 ಡಿಜಿಪಿ 2009, ದಿನಾಂಕ: 15-05-14.
2. ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು, ಇವರ ಪತ್ರ ಸಂಖ್ಯೆ: ED/KEA/ADMN/CR-54/2014-15, ದಿನಾಂಕ:24-10-2019, 26-10-2019, 21-12-2019 ಹಾಗೂ 21-10-2020.
3. ಈ ಕಚೇರಿ ಸಮಸಂಖ್ಯೆ ಆದೇಶ ದಿನಾಂಕ:17-09-2021.
4. ಪ್ರಾಂಶುಪಾಲರು, ಸರ್ಕಾರಿ ಪದವಿ ಪೂರ್ವ ಕಾಲೇಜು, ಹೊಸೂರು, ಶಿಕಾರಿಪುರ, ಶಿವಮೊಗ್ಗ, ಇವರ ಪತ್ರ ದಿನಾಂಕ:08-10-2021.
5. ಪ್ರಾಂಶುಪಾಲರು, ಸರ್ಕಾರಿ ಪದವಿ ಪೂರ್ವ ಕಾಲೇಜು,ಕೂಡ್ಲಿಗಿ, ವಿಜಯನಗರ, ಇವರ ಪತ್ರ ದಿನಾಂಕ:08-10-2021.

-*-

ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿದ್ದ ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು, ರವರು ಉಲ್ಲೇಖ-2ರ ವಿವಿಧ ದಿನಾಂಕಗಳಲ್ಲಿ ಆಯ್ಕೆಪಟ್ಟಿಯನ್ನು ಪ್ರಕಟಿಸಿ ಇಲಾಖೆಗೆ ಸಲ್ಲಿಸಲಾಗಿರುತ್ತದೆ. ಆಯ್ಕೆಯಾದ ಎಲ್ಲಾ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆಗಾಗಿ ಸಂಬಂಧಪಟ್ಟ ಪ್ರಾಧಿಕಾರಗಳಿಗೆ ಅಭ್ಯರ್ಥಿಗಳ ದಾಖಲಾತಿಗಳನ್ನು ನೈಜತೆಗಾಗಿ ಕಳುಹಿಸಿ, ಅಭ್ಯರ್ಥಿಗಳಿಗೆ ದಿನಾಂಕ:11-08-2020 ರಿಂದ 03-09-2020ರ ವರೆಗೆ ಆನ್-ಲೈನ್ ಸ್ಥಳ ನಿಯುಕ್ತಿ ಕೌನ್ಸೆಲಿಂಗ್ ಏರ್ಪಡಿಸಲಾಗಿರುತ್ತದೆ. ಸದರಿ ದಿನಾಂಕದಂದು ನಡೆದ ಸ್ಥಳ ನಿಯುಕ್ತಿ ಕೌನ್ಸೆಲಿಂಗ್‌ಗೆ ಗೈರುಹಾಜರಾದ ಅಭ್ಯರ್ಥಿಗಳಿಗೆ ಮತ್ತೊಂದು ಅವಕಾಶ ನೀಡುವ ಸಂಬಂಧ ದಿನಾಂಕ:25-02-2021ರಂದು ಮರು ಸ್ಥಳನಿಯುಕ್ತಿ ಕೌನ್ಸೆಲಿಂಗ್ ಏರ್ಪಡಿಸಲಾಗಿರುತ್ತದೆ.

ಸ್ಥಳ ಆಯ್ಕೆ ಮಾಡಿಕೊಂಡ, ನೈಜತೆ ಪ್ರಮಾಣ ಪತ್ರ ಸ್ವೀಕೃತಗೊಂಡ ಎಲ್ಲಾ ಅರ್ಹ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಹೊರಡಿಸಲಾಗಿರುತ್ತದೆ. ಅಂತೆಯೇ, ಈ ಕೆಳಕಂಡ ಅಭ್ಯರ್ಥಿಗಳಿಗೂ ಉಲ್ಲೇಖ-3ರಂತೆ ನೇಮಕಾತಿ ಆದೇಶ ಹೊರಡಿಸಲಾಗಿರುತ್ತದೆ. ಆದರೆ ನೇಮಕಾತಿ ಆದೇಶದ ಷರತ್ತಿನಲ್ಲಿ ವಿವರಿಸಿದಂತೆ ನಿಗದಿತ ಕಾಲಾವಧಿಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುವುದಿಲ್ಲವೆಂದು ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರುಗಳು ಉಲ್ಲೇಖ-4 ಹಾಗೂ 5ರ ಪತ್ರದಲ್ಲಿ ವರದಿ ನೀಡಿರುತ್ತಾರೆ.

ಅಭ್ಯರ್ಥಿಗಳ ವಿವರ ಈ ಕೆಳಕಂಡಂತಿದೆ:

| ಕ್ರ.ಸಂ. | ಅಭ್ಯರ್ಥಿಗಳ ಹೆಸರು | ವಿಷಯ | ಆಯ್ಕೆಯಾದ ಪ್ರವರ್ಗ |
|---|---|---|---|
| 01 | ನಾಗರಾಜ.ಎಸ್. | ಕನ್ನಡ | ಜಿ.ಎಂ. |
| 02 | ಚೈತ್ರ.ಎನ್.ಕೆ. | ವಾಣಿಜ್ಯಶಾಸ್ತ್ರ | ಜಿ.ಎಂ.ಹಚ್. |

..2

ಆದ್ದರಿಂದ, ಈ ಮೇಲೆ ವಿವರಿಸಿದ ಉಪನ್ಯಾಸಕ ಹುದ್ದೆಯ ಅಭ್ಯರ್ಥಿಗಳ ನೇಮಕಾತಿಯನ್ನು ಕರ್ನಾಟಕ ಸಿವಿಲ್ ಸೇವೆಗಳು(ಸಾಮಾನ್ಯ ನೇಮಕಾತಿ)ನಿಯಮಗಳು, 1977ರ ನಿಯಮ 18(3)ರ ಪ್ರಕಾರ ರದ್ದು ಪಡಿಸಿ ಆದೇಶಿಸಿದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

**ರವರಿಗೆ:**

ಮೇಲೆ ಹೆಸರಿಸಿರುವ ಅಭ್ಯರ್ಥಿಗಳಿಗೆ – ಮಾಹಿತಿಗಾಗಿ.

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2. ಕಾರ್ಯಕಾರಿ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
3. ಸಹಾಯಕ ನಿರ್ದೇಶಕರು, ಇ–ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು – ಇಲಾಖಾ ಜಾಲತಾಣದಲ್ಲಿ ಪ್ರಕಟಿಸಲು.
4. ಕಚೇರಿ/ಹೆಚ್ಚುವರಿ ಪ್ರತಿ.